



ಅರುಣ ಪಿ. ಭಟ್ಟ

## ವಾರಭವಿಷ್ಯ 01.06.2022ರಿಂದ 08.06.2022ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 05. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜೊತೆ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 02. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಅಕಸ್ಮಾತ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ. ರಾಜಕೀಯದ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು.ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ. ಶುಭದಿನ 08. ಚಂಡಿ ಪಾರಾಯಣ ಮಾಡಿರಿ.




ನವೋಲ್ಲಾಸ ಬರುವುದು. ಧರ್ಮ ಸಂಬಂಧಿತ ಕಾರ್ಯಗಳಿಗೆ ಖರ್ಚು. ಬಂಧು–ಮಿತ್ರರಿಗೆ ಸಹಾಯವನ್ನು ಮಾಡುತ್ತೀರಿ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ನಿಮಗೆ ಎದುರಾಗುವ ಹಲವು ದಿನಗಳ ಸಮಸ್ಯೆಗಳು ಬಗೆಹರೆಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಶುಭದಿನ 07. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ನಿಮ್ಮ ಕೆಲಸಗಳನ್ನು ತುಂಬ ಶ್ರದ್ಧೆಯಿಂದ ಮಾಡಿ ಮುಗಿಸುತ್ತೀರಿ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಆರೋಗ್ಯ ಸ್ಥಿರವಾಗಿ ಇರುತ್ತದೆ. ಶುಭದಿನ 02. ಸೌಂದರ್ಯಲಹರಿ ಪಠಿಸಿರಿ.




ಎಂಜಿನಿಯರ್ ಕ್ಷೇತ್ರದವರಿಗೆ ಈ ಹಿಂದೆಂದಿಗಿಂತ ಹೆಚ್ಚಿನ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಒಟ್ಟಾರೆಯಾಗಿ ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಶುಭದಿನ 03. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈ ವಾರ ಬದುಕಿನಲ್ಲಿ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸಂದರ್ಶನಗಳಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ಎದುರು ಪಕ್ಷದವರು ಸರಿಸಮ ಹೋರಾಟ ಮಾಡುತ್ತಾರೆ. ಶುಭದಿನ 06. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಖರ್ಚುಗಳು ಹೆಚ್ಚಾಗಿ ಆದಾಯದಲ್ಲಿ ಕೊರತೆ ಉಂಟಾಗಿ ಚಿಂತಿತರಾಗುತ್ತೀರಿ. ವಾರವಿಡೀ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಶುಭದಿನ 05. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷವಾದ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಆದರೆ ಈ ಸಮಯದಲ್ಲಿ ಆರೋಗ್ಯ ಸ್ಥಿತಿ ಪೂರಕವಾಗಿರಲ್ಲ. ಭುಜದ ನೋವು, ತಲೆ ನೋವು ನಿಮ್ಮನ್ನು ಕಾಡಲಿದೆ. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಶುಭದಿನ 04. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವ್ಯಾಪಾರ ವಹಿವಾಟು ಮಾಡುವವರು ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಆರೋಗ್ಯದಲ್ಲಿ ಸಮಸ್ಯೆ ಕಾಡುವುದಿಲ್ಲ. ಇದರಿಂದ ಎಷ್ಟೇ ಚಟುವಟಿಕೆ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ನಿರ್ಧರಿಸುತ್ತಿರಿ. ಶುಭದಿನ 05. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಶುಭದಿನ 06. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಶುಭದಿನ 03. ಕನಕಧಾರಾ ಸ್ತೋತ್ರ ಪಠಣಮಾಡಿರಿ.